ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು- 560012.

ದಿನಾಂಕ: 10.10.2018.

ಸಂಖ್ಯೆ: ಪಪೂಶಿಇ/ಪರೀಕ್ಷೆ/ಹ.ಪ.ಹೆ.ಅ/ದ್ವಿತೀಯ/2018-19

## ಸುತ್ತೋಲೆ :

**ವಿಷಯ:** ಪದವಿ ಪೂರ್ವ ಶಿಕ್ಷಣದ ವ್ಯವಹಾರ ಅಧ್ಯಯನ, ಲೆಕ್ಕಶಾಸ್ತ್ರ ಹಾಗೂ ಅರ್ಥಶಾಸ್ತ್ರ ವಿಷಯಗಳ ವಿದ್ಯಾರ್ಥಿಗಳು ಪರೀಕ್ಷೆ ಬರೆಯುವ ಬಗ್ಗೆ.

**ಉಲ್ಲೇಖ:** ಈ ಕಛೇರಿ ಪತ್ರ ಸಂಖ್ಯೆ:ಪಪೂಶಿಇ/ಶೈ.ಶಾ-1/ಹ.ಪ.ಹೆ.ಅ (ಪರೀಕ್ಷೆ) / 2017-18 ದಿನಾಂಕ:31.07.2018

* * * * *

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, 2018-19 ನೇ ಸಾಲಿನಲ್ಲಿ ದ್ವಿತೀಯ ಪಿ.ಯು.ಸಿ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಹೊಸ ವಿದ್ಯಾರ್ಥಿಗಳು (FRESHERS) ಮತ್ತು ಮಾರ್ಚ್ 2019ರ ದ್ವಿತೀಯ ಪಿ.ಯು.ಸಿ ವಾರ್ಷಿಕ ಪರೀಕ್ಷೆಗೆ ನೋಂದಾಯಿಸಿಕೊಂಡಿರುವ ಖಾಸಗಿ ಅಭ್ಯರ್ಥಿಗಳು (PRIVATE CANDIDATES) ಹೊಸ ಪಠ್ಯಕ್ರಮ(ಎನ್.ಸಿ.ಇ.ಆರ್.ಟಿ ಪಠ್ಯಕ್ರಮ)ದಲ್ಲಿಯೇ ದ್ವಿತೀಯ ಪಿ.ಯು.ಸಿ ಪರೀಕ್ಷೆಯನ್ನು ಬರೆಯತಕ್ಕದ್ದು.

2018-19 ನೇ ಸಾಲಿನಲ್ಲಿ ದ್ವಿತೀಯ ಪಿ.ಯು.ಸಿ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಹೊಸ ವಿದ್ಯಾರ್ಥಿಗಳನ್ನು ಹೊರತುಪಡಿಸಿ, ಇನ್ನುಳಿದ ಪುನರಾವರ್ತಿತ (REPEATERS) ವಿದ್ಯಾರ್ಥಿಗಳು ವ್ಯವಹಾರ ಅಧ್ಯಯನ, ಲೆಕ್ಕಶಾಸ್ತ್ರ ಹಾಗೂ ಅರ್ಥಶಾಸ್ತ್ರ ವಿಷಯಗಳಲ್ಲಿ 2014-15 ರಿಂದ 2017-18 ರವರೆಗೆ ನಿಗದಿಪಡಿಸಿದ್ದ ಪಠ್ಯಕ್ರಮದಲ್ಲಿ ದ್ವಿತೀಯ ಪಿ.ಯು.ಸಿ ಪರೀಕ್ಷೆಯನ್ನು ಬರೆಯಲು ಅವಕಾಶವನ್ನು ಕಲ್ಪಿಸಿ ಆದೇಶಿಸಲಾಗಿದೆ.

10/10/18

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿಗಳು,

1. ಜಂಟಿ ನಿರ್ದೇಶಕರು(ಶೈಕ್ಷಣಿಕ)(ಪರೀಕ್ಷೆ)(ಆಡಳಿತ)
2. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರ ಮುಖಾಂತರ ಎಲ್ಲಾ ಕಾಲೇಜಿನ ಪ್ರಾಂಶುಪಾಲರಿಗೆ ಮುಂದಿನ ಕ್ರಮಕ್ಕಾಗಿ.
3. ಇ-ಆಡಳಿತ ಶಾಖೆ ಅಂತರ್‌ಜಾಲದಲ್ಲಿ ಅಳವಡಿಸಲು.
4. ಕಛೇರಿ ಪ್ರತಿ.